Akashvani : Bangalore
Regional Bulletin In Kannada
31.08.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೆಪಿಎಸ್‌ಸಿ ಹಗರಣದ ತನಿಖೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
- ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಸಿಹಿ ತಿಂಡಿ ತಯಾರಿಕಾ ಘಟಕಗಳ ಮೇಲೆ ಆಹಾರ ಸುರಕ್ಷತಾ ಇಲಾಖೆ ಕಾರ್ಯಾಚರಣೆ
- ಸರ್ಕಾರಿ ಕಟ್ಟಡಗಳ ಮೇಲೆ ಸೋಲಾರ್ ಮೇಲ್ಛಾವಣಿ ವ್ಯವಸ್ಥೆ ಅಳವಡಿಸಲು ಇಂಧನ ಇಲಾಖೆ ನಿರ್ಧಾರ
- ಸೆಪ್ಟಂಬರ್ ೧೮ ರಂದು ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ; ಪ್ರವಾಸೋದ್ಯಮ ನೀತಿ, ತುಳು ಭಾಷೆ ಸ್ಥಾನಮಾನದ ಚರ್ಚೆಗೆ ನಿರ್ಧಾರ
- ರಾಜ್ಯ ಸರ್ಕಾರದ ಆಡಳಿತ ವೈಫಲ್ಯದ ವಿರುದ್ಧ ನಾಳೆಯಿಂದ ಬಿಜೆಪಿ ಪಾದಯಾತ್ರೆ

---

ಕೆಪಿಎಸ್‌ಸಿ ಹಗರಣ ಕುರಿತಂತೆ ನಡೆಯುತ್ತಿರುವ ತನಿಖೆಯಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಕುಮಾರಸ್ವಾಮಿ ಕೆಪಿಎಸ್‌ಸಿ ಮೂಲಕ ಬಿಜೆಪಿ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

ಭೂಮಿ ಗ್ಯಾರಂಟಿ ಕೇವಲ ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ. ಇದು ರಾಜ್ಯದ ಎಲ್ಲಾ ಭೂಮಾಲೀಕರಿಗೂ ಅನ್ವಯವಾಗಲಿದೆ ಎಂದು ತಿಳಿಸಿದ್ದಾರೆ.

---

ಆರೋಗ್ಯ ಸಚಿವ  ಯು.ಟಿ.ಖಾದರ್ ನಿರ್ದೇಶನ ಮೇರೆಗೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗದ ವತಿಯಿಂದ ಇಂದು  ರಾಜ್ಯದ ಹಲವೆಡೆ ಸಿಹಿ ತಿಂಡಿ ತಯಾರಿಕಾ ಘಟಕಗಳ ಮೇಲೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ.

ಒಟ್ಟು ೧೬ ಘಟಕಗಳಲ್ಲಿ ಪರಿಶೀಲನೆ ನಡೆಸಿ, ಅಲ್ಲಿ ಬಳಸಲಾದ ಎಣ್ಣೆ, ಮೊಸರು ಸೇರಿದಂತೆ ಹಲವು ಪದಾರ್ಥಗಳ ಮಾದರಿಗಳನ್ನು ಸಂಗ್ರಹಿಸಿ ಗುಣಮಟ್ಟ ಹಾಗೂ ಆಹಾರ ಸುರಕ್ಷತಾ ಮಾನದಂಡಗಳನ್ನು ಪರಿಶೀಲಿಸುವ ಸಲುವಾಗಿ ಪ್ರಯೋಗಾಲಯಗಳಿಗೆ ಕಳುಹಿಸಲಾಗಿದೆ.

ಗುರುತಿಲ್ಲದ ಬ್ರ್ಯಾಂಡಿಂಗ್ ಕಂಡು ಬಂದ ಹಿನ್ನೆಲೆಯಲ್ಲಿ ಹಲವು ಆಹಾರ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

'ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜ್ಲಿ' ಯೋಜನೆಯಡಿ ಸರ್ಕಾರಿ ಕಟ್ಟಡಗಳ ಮೇಲೆ ಸೋಲಾರ್ ಮೇಲ್ಛಾವಣಿ ವ್ಯವಸ್ಥೆಗಳನ್ನು ಅಳವಡಿಸುವ ಕಾರ್ಯವನ್ನು ರಾಜ್ಯ ಸರ್ಕಾರ ತ್ವರಿತಗೊಳಿಸಲಿದೆ ಎಂದು ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ತಿಳಿಸಿದ್ದಾರೆ.

'ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜ್ಲಿ' ಯೋಜನೆಯಡಿ ಸರ್ಕಾರಿ ಕಟ್ಟಡಗಳ ಸೌರೀಕರಣ ಹಾಗೂ ಪಾವತಿ ವ್ಯವಸ್ಥೆ ಕುರಿತು ಬೆಂಗಳೂರಿನಲ್ಲಿಂದು ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ಸೌರಫಲಕ ಅಳವಡಿಸಲು ಅನುಕೂಲಕರವಾದ ಮೇಲ್ಛಾವಣಿ ಸ್ಥಳಾವಕಾಶ ಹೊಂದಿರುವ ಜಿಲ್ಲಾಧಿಕಾರಿಗಳ ಕಚೇರಿಗಳು ಸೇರಿದಂತೆ ಇತರ ಸರ್ಕಾರಿ ಕಟ್ಟಡಗಳಲ್ಲಿ ನವೀಕರಿಸಬಹುದಾದ ಇಂಧನ ಬಳಕೆಗೆ ಒತ್ತು ನೀಡಲಾಗುವುದು ಎಂದು ಹೇಳಿದ್ದಾರೆ.

ಉತ್ಪಾದನೆಯಾಗುವ ವಿದ್ಯುತ್ ಅನ್ನು ಮೊದಲು ಕಟ್ಟಡದ ಸ್ವಂತ ಬಳಕೆಗೆ ವಿನಿಯೋಗಿಸಲಾಗುವುದು. ಹೆಚ್ಚುವರಿ ವಿದ್ಯುತ್ ಅನ್ನು ಗ್ರಿಡ್‌ಗೆ ರವಾನಿಸಲಾಗುವುದು ಎಂದು ತಿಳಿಸಿದ್ದಾರೆ.

ಈ ಉಪಕ್ರಮವು ಇಂಧನ ಭದ್ರತೆಯನ್ನು ಕಾಯ್ದುಕೊಳ್ಳಲು ನೆರವಾಗಲಿದೆ.

---

ಕರಾವಳಿ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ವ್ಯವಸ್ಥೆ ರೂಪಿಸುವ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ನಡೆಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸೆಪ್ಟೆಂಬರ್ ೧೮ರಂದು ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆಗೆ ದಿನಾಂಕ ನಿಗದಿಯಾಗಿದೆ.

ಸಚಿವ ಸಂಪುಟ ಸಭೆಯಲ್ಲಿ ಕರಾವಳಿ ಜಿಲ್ಲೆಗಳ ಪ್ರಸ್ತಾವನೆಗಳಿಗೆ ಆದ್ಯತೆ ನೀಡಲಾಗುವುದು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಯಲ್ಲಿ ಕಸ್ತೂರಿ ರಂಗನ್ ವರದಿ, ಪ್ರವಾಸೋದ್ಯಮ, ಮೂಲಸೌಕರ್ಯ, ಕಾನೂನು ಸುವ್ಯವಸ್ಥೆ, ವಿಮಾನ ನಿಲ್ದಾಣ ವಿಸ್ತರಣೆ, ತುಳು ಭಾಷೆಗೆ ಹೆಚ್ಚುವರಿ ಅಧಿಕೃತ ಭಾಷೆಯ ಸ್ಥಾನಮಾನ ಸೇರಿದಂತೆ ಹಲವು ವಿಷಯಗಳು ಚರ್ಚೆಗೆ ಬರುವ ಸಾಧ್ಯತೆ ಇದೆ.

---

ಸಾರ್ವಜನಿಕರಲ್ಲಿ ಸ್ವಯಂ ಶಿಸ್ತು ಮೂಡದೇ ಹೋದರೆ ಬೆಂಗಳೂರು ನಗರದ ಪ್ರಮುಖ ಸಮಸ್ಯೆಯಾದ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವುದು ಅಸಾಧ್ಯ ಎಂದು ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ.

ವಿಕಾಸಸೌಧದಲ್ಲಿಂದು ಮಾಜಿ ಮಹಾಪೌರರ ಜೊತೆ ಸಭೆ ನಡೆಸಿ ಮಾತನಾಡಿದ ಅವರು, ಬೆಂಗಳೂರಿನ ಪ್ರಮುಖ ಸಮಸ್ಯೆಯಲ್ಲಿ ಟ್ರಾಫಿಕ್ ಸಮಸ್ಯೆಗೆ ಅಗ್ರಸ್ಥಾನವಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಮಾಜಿ ಮಹಾಪೌರರು ಸರ್ಕಾರಕ್ಕೆ ಹಲವು ಸಲಹೆಗಳನ್ನು ನೀಡಿದ್ದು, ಎಲ್ಲಾ ಕಡೆ ರುದ್ರಭೂಮಿಗಳ ಅಭಿವೃದ್ಧಿಯಾಗಬೇಕು. ರಸ್ತೆ, ಗುಂಡಿಗಳನ್ನು ವೈಜ್ಞಾನಿಕವಾಗಿ ಮುಚ್ಚಬೇಕು. ಕಸದ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ಬಗೆಹರಿಸಬೇಕು ಎಂದು ತಿಳಿಸಿದ್ದಾರೆ.

ನಗರದಲ್ಲಿ ಮರಗಳ ರೆಂಬೆಕೊಂಬೆಗಳ ತೆರವು ಕಾರ್ಯಾಚರಣೆ ಸರಿಯಾಗಿ ಮಾಡಬೇಕು. ಉದ್ಯಾನಗಳಲ್ಲಿರುವ ಆಟಿಕೆಗಳನ್ನು ಬದಲಿಸಬೇಕು ಎಂದು ಸಲಹೆ ನೀಡಿದ್ದಾರೆ.

---

ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ದುರ್ಬಳಕೆಯಾದ ೧೮೭ ಕೋಟಿ ರೂಪಾಯಿ ಹಣವನ್ನು ಮರಳಿ ಜಮೆ ಮಾಡುವಂತೆ ಆಗ್ರಹಿಸಿ ನಾಳೆಯಿಂದ ಬಿಜೆಪಿ ಪಾದಯಾತ್ರೆ ಹಮ್ಮಿಕೊಂಡಿದೆ.

ಸುಮಾರು ೧೭೫ ಕಿಲೋಮೀಟರ್ ಪಾದಯಾತ್ರೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಲಿದ್ದಾರೆ.

ರಾಯಚೂರಿನ ಲಿಂಗಸಗೂರಿನಿಂದ ಬಳ್ಳಾರಿಯವರೆಗೆ ಹತ್ತು ದಿನಗಳ ಕಾಲ ನಡೆಯುವ ಈ ಪಾದಯಾತ್ರೆ ಕಾಂಗ್ರೆಸ್ ಸರ್ಕಾರದ ಆಡಳಿತದ ವೈಫಲ್ಯಗಳನ್ನು ಜನರಿಗೆ ತಲುಪಿಸುವ ಗುರಿಹೊಂದಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಹಲವು ನಾಯಕರು ಪಾದಯಾತ್ರೆಯಲ್ಲಿ ಭಾಗಿಯಾಗಲಿದ್ದಾರೆ.

---

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕರಣದಲ್ಲಿ ಬೆಂಗಳೂರಿನ ನ್ಯಾಯಾಲಯ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಹಾಗೂ ಬಿಜೆಪಿ ಮುಖಂಡ ಬಸವರಾಜ್ ಕನ್ನಾಳೆ ಅವರನ್ನು  ಹತ್ತು ದಿನಗಳ ಕಾಲ ಸಿಐಡಿ ಕಸ್ಟಡಿಗೆ ಒಪ್ಪಿಸಿದೆ.

ಪ್ರಶ್ನೆ ಪತ್ರಿಕೆ ಸೋರಿಕೆ, ಒಎಂಆರ್ ಉತ್ತರ ಪತ್ರಿಕೆಗಳ ತಿದ್ದುಪಡಿ ಸೇರಿದಂತೆ ಇತರ ಅಕ್ರಮಗಳ ಕುರಿತು ಹೆಚ್ಚಿನ ವಿಚಾರಣೆ ಮತ್ತು ತನಿಖೆಗೆ ಅನುಕೂಲವಾಗುವಂತೆ ನ್ಯಾಯಾಲಯ ಸೆಪ್ಟಂಬರ್ ೯ ರವರೆಗೆ ಸಿಐಡಿ ಕಸ್ಟಡಿಗೆ ನೀಡಿದೆ.

ನೇಮಕಾತಿ ಪ್ರಕ್ರಿಯೆ ಭಾಗವಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಹೋಟೆಲ್‌ಗಳು ಮತ್ತು ರೆಸಾರ್ಟ್‌ಗಳಲ್ಲಿ ತರಬೇತಿ ನೀಡಲಾಗಿದೆ ಎಂಬ ಕುರಿತಂತೆಯೂ ಸಿಐಡಿ ತನಿಖೆ ನಡೆಸುತ್ತಿದೆ.

---

ಮುಂದಿನ ಎರಡು ತಿಂಗಳೊಳಗೆ ಹಾಸನ ಜಿಲ್ಲಾಧಿಕಾರಿ ಕಚೇರಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ಶಿವಲಿಂಗೇಗೌಡ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಬೆಂಗಳೂರಿನ ವಿಕಾಸಸೌಧದಲ್ಲಿಂದು ಸಭೆ ನಡೆಸಿದ ಅವರು, ಮಂಜೂರಾದ ಅನುದಾನಕ್ಕಿಂತ ಹೆಚ್ಚುವರಿಯಾಗಿ ಹಣ ಖರ್ಚಾಗಿರುವ ಬಗ್ಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ, ಗಮನ ಸೆಳೆದಾಗ ಹೆಚ್ಚುವರಿ ಮೊತ್ತವನ್ನು ಲೋಕೋಪಯೋಗಿ ಮತ್ತು ಕಂದಾಯ ಇಲಾಖೆಯಿಂದ ಪ್ರತ್ಯೇಕವಾಗಿ ಶೇಕಡಾ ೫೦ ರಷ್ಟು ಭರಿಸುವಂತೆ ಸೂಚನೆ ನೀಡಿದ್ದಾರೆ.

ಇದೇ ವೇಳೆ, ಹಾಸನಾಂಬ ಉತ್ಸವವನ್ನು ಈ ಬಾರಿ ಹಿಂದಿನ ವರ್ಷಕ್ಕಿಂತಲೂ ಹೆಚ್ಚು ಅದ್ಧೂರಿಯಾಗಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಬಳಿಕ ಹಾಸನ ನಗರದ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣದ ಕಾಮಗಾರಿ ಕುರಿತಂತೆಯೂ ಸಚಿವರು ಪ್ರಗತಿ ಪರಿಶೀಲನೆ ನಡೆಸಿದರು.

---

ನಗರ ಸ್ಥಳೀಯ ಸಂಸ್ಥೆಗಳು ನೀರು, ರಸ್ತೆ, ಒಳಚರಂಡಿ, ಬೀದಿ ದೀಪಗಳ ವ್ಯವಸ್ಥೆ ಮಾಡಬೇಕು ಎಂದು ಪೌರಾಡಳಿತ ಸಚಿವ ಹೆಚ್ ಸಿ ಬಾಲಕೃಷ್ಣ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಮೈಸೂರು, ಚಾಮರಾಜನಗರ ಹಾಗೂ ಕೊಡಗು, ಜಿಲ್ಲಾ ವ್ಯಾಪ್ತಿಯ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಸೌಲಭ್ಯಗಳನ್ನು ಕಲ್ಪಿಸಲು ಸಂಪನ್ಮೂಲಗಳ ಕ್ರೋಢೀಕರಣ ಮಾಡಬೇಕು ಎಂದು ಹೇಳಿದ್ದಾರೆ.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇಂಜಿನಿಯರ್ ಹುದ್ದೆಗಳು ಖಾಲಿ ಇದ್ದಲ್ಲಿ ಪಿಡಬ್ಲ್ಯುಡಿ ಇಲಾಖೆಯಿಂದ ಹೆಚ್ಚುವರಿ ಹೊಣೆ ನೀಡಿ ನಿಯೋಜನೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಯಾವುದೇ ಅನಧಿಕೃತ ಬಡಾವಣೆಗಳು ನಿರ್ಮಾಣ ಆಗಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಪಶು ಸಂಗೋಪನೆ ಹಾಗೂ ರೇಷ್ಮೆ ಇಲಾಖೆಯ ಸಚಿವ ಪುಟ್ಟರಂಗಶೆಟ್ಟಿ ಮಾತನಾಡಿ, ಚಾಮರಾಜ ನಗರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶವ ಸಂಸ್ಕಾರ ಮಾಡಲು ಚಿತಾಗಾರಗಳನ್ನು ಸ್ಥಾಪಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಪೊನ್ನಣ್ಣ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿ ಅಮೃತ್ ೨ ಯೋಜನೆಯಡಿ ವಿರಾಜಪೇಟೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಕಾಮಗಾರಿ ಇನ್ನೂ ಮುಗಿದಿಲ್ಲ. ಶೀಘ್ರವೇ ಮನೆ ಮನೆಗೆ ನಲ್ಲಿ ಸಂಪರ್ಕ ಮಾಡಿಸುವಂತೆ ತಿಳಿಸಿದ್ದಾರೆ.

---

ಧಾರವಾಡ ಜಿಲ್ಲೆಯಲ್ಲಿ ಜನವರಿಯಿಂದ ಈವರೆಗೆ ೧೪ ಎಚ್೧ಎನ್೧ ವೈರಲ್ ಜ್ವರ ದೃಢಪಟ್ಟಿದ್ದು, ಯಾವುದೇ ಭಯ ಹಾಗೂ ಆತಂಕ ಬೇಡ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಪರಶುರಾಮ್ ತಿಳಿಸಿದ್ದಾರೆ.

ಪ್ರಸ್ತುತ ಕಂಡುಬರುತ್ತಿರುವ ವೈರಲ್ ಸೋಂಕು ಸಾಮಾನ್ಯ ನೆಗಡಿ, ಕೆಮ್ಮು ಮತ್ತು ಜ್ವರದಂತೆ ಇರಲಿದ್ದು, ಬಹುತೇಕ ೨ ರಿಂದ ೩ ದಿನಗಳಲ್ಲಿ ತಾನಾಗಿಯೇ ಗುಣಮುಖವಾಗುತ್ತದೆ. ಆದಾಗ್ಯೂ, ಸಣ್ಣ ಮಕ್ಕಳು, ವಯೋವೃದ್ಧರು ಹಾಗೂ ಬಿಪಿ, ಸಕ್ಕರೆ ಕಾಯಿಲೆ, ಕ್ಯಾನ್ಸರ್, ಎಚ್ಐವಿ ಮತ್ತು ಟಿಬಿಯಂತಹ ರೋಗನಿರೋಧಕ ಶಕ್ತಿ ಕಡಿಮೆ ಇರುವವರು ನಿರ್ಲಕ್ಷ್ಯ ತೋರದೆ ಮುನ್ನೆಚ್ಚರಿಕೆ ತಗೆದುಕೊಳ್ಳುವುದು ಅಗತ್ಯ ಎಂದು ತಿಳಿಸಿದ್ದಾರೆ.

ಎಚ್೧ಎನ್೧ ಸೋಂಕು ದೃಢಪಟ್ಟಲ್ಲಿ ಕೋವಿಡ್-೧೯ ಮಾದರಿಯಲ್ಲೇ ರೋಗಿಗಳನ್ನು ಪ್ರತ್ಯೇಕಿಸಿ ಚಿಕಿತ್ಸೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

---

ತಮಿಳುನಾಡಿನ ಮೆಟ್ಟೂರು ಅಣೆಕಟ್ಟೆಯಿಂದ ನಾಳೆ ಕಾವೇರಿ ಜಲಾನಯನ ಪ್ರದೇಶಕ್ಕೆ ನೀರಾವರಿಗಾಗಿ ಅಲ್ಲಿನ ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ಔಪಚಾರಿಕವಾಗಿ ಜಲಾಶಯಗಳ ಸ್ಲೂಸ್ ಗೇಟ್ ತೆರೆಯುವ ಮೂಲಕ ನೀರು ಬಿಡುಗಡೆ ಮಾಡಲಿದ್ದಾರೆ.

ಮೆಟ್ಟೂರು ಜಲಾಶಯದ ಒಳಹರಿವು ಹೆಚ್ಚಾಗಿದ್ದು, ನೀರು ಬಿಡುಗಡೆಯಿಂದ ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಭತ್ತದ ಕೃಷಿಗೆ ತಯಾರಿ ನಡೆಸುತ್ತಿರುವ ತಮಿಳುನಾಡಿನ ರೈತರಲ್ಲಿ ಸಮಾಧಾನ ತಂದಿದೆ.

ಕರ್ನಾಟಕದ ಕಬಿನಿ ಹಾಗೂ ಕೆಆರ್ಎಸ್ ಜಲಾಶಯದಲ್ಲಿ ನೀರಿನ ಏರಿಕೆ ಕಂಡುಬಂದಿದ್ದು, ತಮಿಳುನಾಡಿಗೆ ನೀರು ಬಿಡುಗಡೆ ಮಾಡಲಾಗುತ್ತಿದೆ.

ಇತ್ತ ಮಂಡ್ಯದಲ್ಲಿ ನೀರು ಬಿಡುಗಡೆ ಖಂಡಿಸಿ, ರೈತರು ಪ್ರತಿಭಟನೆ ಮುಂದುವರಿಸಿದ್ದಾರೆ.

---

ಇನ್ನು ಸಂಕ್ಷಿಪ್ತಸುದ್ದಿ..

- ‘ಸಂಶೋಧನೆಗಳು ಪುಸ್ತಕದ ಹಾಳೆಗೆ ಸೀಮಿತವಾಗದೇ ಸಮಾಜದ ಅಗತ್ಯತೆಯನ್ನು ಗುರುತಿಸಿ ಕೊಡುಗೆ ನೀಡಬೇಕು’ ಎಂದು ಡಾ.ಮನಮೋಹನಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ ಕುಲಪತಿ ಪ್ರೊಫೆಸರ್ ಬಿ.ರಮೇಶ್ ದಾವಣಗೆರೆಯಲ್ಲಿ ತಿಳಿಸಿದ್ದಾರೆ.
- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ರೈಲ್ವೆ ನಿಲ್ದಾಣದ ಬಳಿ ರೈಲ್ವೆ ಹಳಿಯ ಮೇಲೆ ನಡೆದುಕೊಂಡು ಹೋಗುತ್ತಿದ್ದ ಇಬ್ಬರು ಮಹಿಳೆಯರು ಹಾಗೂ ಒಂದು ಮಗುವಿಗೆ ಎಕ್ಸ್‌ಪ್ರೆಸ್ ರೈಲೊಂದು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೂವರು ಮೃತಪಟ್ಟಿದ್ದಾರೆ.

__________ ಮುಕ್ತಾಯ _________